ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು

ಶ್ರೀ ಎಂ.ಪಿ.ಪ್ರಕಾಶ್ (ಗೃಹ ಸಚಿವರು): ಮಾನ್ಯ ಅಧ್ಯಕ್ಷರೆ, ದಿನಾಂಕ 09–07–2007ರಂದು 1ನೇ ಪಟ್ಟಿಯ ಸದನದಲ್ಲಿ ಉತ್ತರಿಸುವ 34 ಪ್ರಶ್ನೆಗಳ ಪೈಕಿ 22 ಉತ್ತರಗಳನ್ನು ಮತ್ತು ದಿನಾಂಕ 10–07–2007 ರಂದು 2ನೇ ಪಟ್ಟಿಯ ಲಿಖಿತ ಮೂಲಕ ಉತ್ತರಿಸುವ 56 ಪ್ರಶ್ನೆಗಳ ಪೈಕಿ 26 ಸದನದಲ್ಲಿ ಮಂಡಿಸುತ್ತೇನೆ.

ಸಭಾಧ್ಯಕ್ಷರು: – ಮಂಡಿಸಲಾಯಿತು.

(ಅನುಬಂಧ –1)

2. ಸಭೆಯ ಮುಂದಿಡಲಾದ ಕಾಗದ ಪತ್ರಗಳು.

1) ಶ್ರೀ ಹೆಚ್.ಡಿ.ಕುಮಾರಸ್ವಾಮಿ (ಮುಖ್ಯಮಂತ್ರಿ) : –

ವಿಚಾರಣಾ ಆಯೋಗದ ಕಾಯ್ದೆ 1952ರ ಕಲಂ 3(4)ರ ಅನ್ವಯ:

1. ನ್ಯಾಯಮೂರ್ತಿ ಶ್ರೀ ಬಿ.ಪದ್ಮರಾಜ್ ವಿಚಾರಣಾ ಆಯೋಗ, ಬೆಂಗಳೂರು ಇವರ ವರದಿ.

1987ರ ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರದ ಅಧಿನಿಯಮ 48(5) ಮತ್ತು 49ನೇ ಪ್ರಕರಣದ ಮೇರೆಗೆ:

1. ರಾಯಚೂರು ನಗರಾಭಿವೃದ್ಧಿ ಪ್ರಾಧಿಕಾರದ 2005–06ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿ.

2. ಹಾಸನ ನಗರಾಭಿವೃದ್ಧಿ ಪ್ರಾಧಿಕಾರದ 2006–07ನೇ ಸಾಲಿನ ವಾರ್ಷಿಕ ವರದಿ.

3. ಚಾಮರಾಜನಗರ – ರಾಮಸಮುದ್ರ ನಗರಾಭಿವೃದ್ಧಿ ಪ್ರಾಧಿಕಾರದ 2005–06 ಮತ್ತು 2006–07ನೇ ಸಾಲಿನ ವಾರ್ಷಿಕ ವರದಿ.

4. ಕೊಪ್ಪಳ ನಗರಾಭಿವೃದ್ಧಿ ಪ್ರಾಧಿಕಾರದ 2001–02, 2002–03ಮತ್ತು 2003–04ನೇ ಸಾಲಿನ ವಾರ್ಷಿಕ ವರದಿ ಆಹಗೂ 2002–03 ಮತ್ತು 2004–05ನೇ ಸಾಲಿನ ಲೆಕ್ಕ ಪರಿಶೋಧನಾ ವರದಿ.

5. ಚಿತ್ರದುರ್ಗ ನಗರಾಭಿವೃದ್ಧಿ ಪ್ರಾಧಿಕಾರದ 2005–06ನೇ ಸಾಲಿನ ಲೆಕ್ಕಪರಿಶೋಧನಾ ವರದಿ.

6. ರಾಮನಗರ – ಚನ್ನಪಟ್ಟಣ ನಗರಾಭಿವೃದ್ಧಿ ಪ್ರಾಧಿಕಾರದ 2006–07ನೇ ಸಾಲಿನ ವಾರ್ಷಿಕ ವರದಿ.

7. ಹಾಸನ ನಗರಾಭಿವೃದ್ಧಿ ಪ್ರಾಧಿಕಾರದ 2006–07ನೇ ಸಾಲಿನ ವಾರ್ಷಿಕ ವರದಿ.

9. ಗದಗ – ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ 2006–07ನೇ ಸಾಲಿನ ವಾರ್ಷಿಕ ವರದಿ.

10. ಮಂಡ್ಯ ನಗರಾಭಿವೃದ್ಧಿ ಪ್ರಾಧಿಕಾರದ 2005–06ನೇ ಸಾಲಿನ ಲೆಕ್ಕಪರಿಶೋಧನಾ ವರದಿ.

ಕರ್ನಾಟಕ ನಗರ ನೀರು ಸರಬ್ಜಾರಜು ಮತ್ತು ಒಳಚರಂಡಿ ಮಂಡಳಿಯ ಕಾಯ್ದೆ, 1973ರ ಕಲಂ 39ರ ಪ್ರಕಾರ:

1. ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ 2005–06ನೇ ಸಾಲಿನ ವಾರ್ಷಿಕ ಸಾಧನಾ ವರದಿ.

2. ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ 2005–06ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿಗಳನ್ನು ಮಂಡಿಸುತ್ತೇನೆ.

ಶ್ರೀ ಎಂ.ಪಿ.ಪ್ರಕಾಶ್ (ಒಳಾಡಳಿತ, ಕಾನೂನು, ನ್ಯಾಯ, ಮಾನವ ಹಕ್ಕುಗಳ ಹಾಗೂ ಸಂಸದೀಯ ವ್ಯವಹಾರಗಳ ಸಚಿವರು) ಅವರು :

1. ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕರದ 2004–05ನೇ ಸಾಲಿನ ಲೆಕ್ಕಪರಿಶೋಧನಾ ವರದಿಯನ್ನು ಮಂಡಿಸುತ್ತೇನೆ.

3) **ಹೆಚ್.ಡಿ.ರೇವಣ್ಣ (ಜಲಸಂಪನ್ಮೂಲ ಸಚಿವರ ಪರವಾಗಿ) ಅವರು:**

ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರದ 1980ರ ಅಧಿನಿಯಮ 24ರ ಪ್ರಕಾರ :

1. ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರ, ಕೃಷ್ಣಾ ಮೇಲ್ದಂಡೆ ಯೋಜನೆ, ಭೀಮರಾಯನ ಗುಡಿ, ಶಹಾಪುರ ಗುಲ್ಬರ್ಗಾದ 2006–07ನೇ ಸಾಲಿನ ವಾರ್ಷಿಕ ವರದಿ.

2. ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರ, ನೀರಾವರಿ ಯೋಜನೆಗಳ ವಲಯ, ಗುಲ್ಬರ್ಗಾದ 2006–07ನೇ ಸಾಲಿನ ವಾರ್ಷಿಕ ವರದಿಗಳನ್ನು ಮಂಡಿಸುತ್ತೇನೆ.

4) **ಶ್ರೀ ಹೆಚ್.ಡಿ.ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು) ಅವರು:**

1956ರ ಕಂಪನಿ ಅಧಿನಿಯಮ 619(ಎ) ಪ್ರಕರಣದ ಮೇರೆಗೆ:

1. ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿಯ 2005–06ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಮಂಡಿಸುತ್ತೇನೆ.

5) **ಶ್ರೀ ಎಂ.ಪಿ.ಪ್ರಕಾಶ್ (ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರ ಪರವಾಗಿ) ಅವರು:**

1974ರ ಜಲ ಕಾಯ್ದೆಯ ಕಲಂ 40(7)ರ ಪ್ರಕಾರ :

1. ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿಯ 2004–05ನೇ ಸಾಲಿನ ಲೆಕ್ಕಪರಿಶೋಧನಾ ವರದಿಯನ್ನು ಮಂಡಿಸುತ್ತೇನೆ.

6) ಎಂ.ಪಿ.ಪ್ರಕಾಶ್ (ಉನ್ನತ ಶಿಕ್ಷಣ ಸಚಿವರ ಪರವಾಗಿ) ಅವರು:

2000ರ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯದ ಅಧಿನಿಯಮದ 47(4)ರ ಪ್ರಕರಣದ ಮೇರೆಗೆ :

1. ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳ ಗಂಗೋತ್ರಿಯ 2004–05ನೇ ಸಾಲಿನ ಲೆಕ್ಕಪರಿಶೋಧನಾ ವರದಿ.

2. ಕರ್ನಾಟಕ ರಾಜ್ಯ ಮಹಿಳಾ ವಿಶ್ವವಿದ್ಯಾಲಯ, ಬಿಜಾಪುರದ 2003–04ನೇ ಸಾಲಿನ ಲೆಕ್ಕಪರಿಶೋಧನಾ ಅನುಸರಣಾ ವರದಿ.

3. ಕುವೆಂಪು ವಿಶ್ವವಿದ್ಯಾಲಯ, ಧಾರವಾಡದ 2004–05 ಮತ್ತು 2005–06ನೇ ಸಾಲಿನ ವಾರ್ಷಿಕ ವರದಿಗಳನ್ನು ಮಂಡಿಸುತ್ತೇನೆ.

7) ಶ್ರೀ ಎಂ.ಪಿ.ಪ್ರಕಾಶ್ (ಸಾರಿಗೆ ಸಚಿವರ ಪರವಾಗಿ) ಅವರು :

1. ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ 45ನೇ 2005–06ನೇ ಸಾಲಿನ ವಾರ್ಷಿಕ ವರದಿಯನ್ನು ಮಂಡಿಸುತ್ತೇನೆ.

8) ಶ್ರೀ ಎಂ.ಪಿ.ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರ ಪರವಾಗಿ) ಅವರು :

1993ರ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 262(3)ನೇ ಮತ್ತು 300(5) ನೇ ಪ್ರಕರಣದ ಮೇರೆಗೆ:

1. ಬೆಂಗಳೂರು ಗ್ರಾಮಾಂತರ ಜಿಲ್ಲಾಪಂಚಾಯತ್‌ನ 2005–06ನೇ ಸಾಲಿನ ವಾರ್ಷಿಕ ಆಡಳಿತ ವರದಿ.

2. ಹಾವೇರಿ ಜಿಲ್ಲಾ ಪಂಚಾಯತ್‌ನ 2004–05ನೇ ಸಾಲಿನ ಲೆಕ್ಕಪರಿಶೋಧನಾ ವರದಿ.

3. ಹಾಸನ ಜಿಲ್ಲಾ ಪಂಚಾಯತ್‌ನ 2004–05ನೇ ಸಾಲಿನ ವಾರ್ಷಿಕ ಲೆಕ್ಕಗಳು ಮತ್ತು ಲೆಕ್ಕಪರಿಶೋಧನಾ ವರದಿ.

4. ಬಾಗಲಕೋಟೆ ಜಿಲ್ಲಾ ಪಂಚಾಯತ್‌ನ 2003–04ನೇ ಸಾಲಿನ ವಾರ್ಷಿಕ ಲೆಕ್ಕಪತ್ರಗಳು ಮತ್ತು ಲೆಕ್ಕಪರಿಶೋಧನಾ ವರದಿ.

5. ಹಾವೇರಿ ಜಿಲ್ಲಾ ಪಂಚಾಯತ್‌ನ 2005–06ನೇ ಸಾಲಿನ ವಾರ್ಷಿಕ ಆಡಳಿತ ವರದಿ.

6. ಗುಲ್ಬರ್ಗಾ ಜಿಲ್ಲಾ ಪಂಚಾಯತ್‌ನ 2004–05ನೇ ಸಾಲಿನ ವಾರ್ಷಿಕ ಲೆಕ್ಕಪತ್ರಗಳ ಪರಿಶೋಧನಾ ವರದಿ.

7. ತುಮಕೂರು ಜಿಲ್ಲಾ ಪಂಚಾಯತ್‌ನ 2004–05ನೇ ಸಾಲಿನ ವಾರ್ಷಿಕ ಲೆಕ್ಕಪತ್ರಗಳ ಪರಿಶೋಧನಾ ವರದಿ.

8. ದಾವಣಗೆರೆ ಜಿಲ್ಲಾ ಪಂಚಾಯತ್‌ನ 2004–05ನೇ ಸಾಲಿನ ವಾರ್ಷಿಕ ಲೆಕ್ಕಪತ್ರಗಳ ಪರಿಶೋಧನಾ ವರದಿ.

9. ಬಾಗಲಕೋಟೆ ಜಿಲ್ಲಾ ಪಂಚಾಯತ್‌ನ 2004–05ನೇ ಸಾಲಿನ ವಾರ್ಷಿಕ ಲೆಕ್ಕಪತ್ರಗಳ ಪರಿಶೋಧನಾ ವರದಿ.

10. ಬೆಳಗಾವಿ ಜಿಲ್ಲಾ ಪಂಚಾಯತ್‌ನ 2004–05ನೇ ಸಾಲಿನ ವಾರ್ಷಿಕ ಲೆಕ್ಕಪತ್ರಗಳ ಪರಿಶೋಧನಾ ವರದಿ.

11. ಬೀದರ್ ಜಿಲ್ಲಾ ಪಂಚಾಯತ್‌ನ 2004–05ನೇ ಸಾಲಿನ ವಾರ್ಷಿಕ ಲೆಕ್ಕಪತ್ರಗಳ ಪರಿಶೋಧನಾ ವರದಿ.

12. ಉಡುಪಿ ಜಿಲ್ಲಾ ಪಂಚಾಯತ್‌ನ 2005–06ನೇ ಸಾಲಿನ ವಾರ್ಷಿಕ ಆಡಳಿತ ವರದಿ.

13. ಕೋಲಾರ ಜಿಲ್ಲಾ ಪಂಚಾಯತ್‌ನ 2004–05ನೇ ಸಾಲಿನ ಲೆಕ್ಕಪತ್ರಗಳ ಪರಿಶೋಧನಾ ವರದಿ.

14. ಚಿತ್ರದುರ್ಗ ಜಿಲ್ಲಾ ಪಂಚಾಯತ್‌ನ 2005–06ನೇ ಸಾಲಿನ ವಾರ್ಷಿಕ ಆಡಳಿತ ವರದಿ.

15. ಕೊಡಗು ಜಿಲ್ಲಾಪಂಚಾಯತ್‌ನ 2004–05ನೇ ಸಾಲಿನ ಲೆಕ್ಕಪತ್ರಗಳ ಪರಿಶೋಧನಾ ವರದಿಗಳನ್ನು ಮಂಡಿಸುತ್ತೇನೆ.

9) ಶ್ರೀ ಎಂ.ಪಿ.ಪ್ರಕಾಶ್ (ಕಾರ್ಮಿಕ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರ ಪರವಾಗಿ) ಅವರು :

1956ರ ಕಂಪನಿ ಅಧಿನಿಯಮ 619(ಎ) ಪ್ರಕರಣದ ಮೇರೆಗೆ :

1. ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತದ 20ನೇ 2005–06ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಮಂಡಿಸುತ್ತೇನೆ.

10) ಶ್ರೀ ಕಟ್ಟಾಸುಬ್ರಮಣ್ಯ ನಾಯ್ಡು (ಭಾರಿ ಮತ್ತು ಮಧ್ಯಮ ಕೈಗಾರಿಕಾ ಸಚಿವರು) ಅವರು:

1956ರ ಕಂಪನಿ ಅಧಿನಿಯಮ 619(ಎ) ಪ್ರಕರಣದ ಮೇರೆಗೆ:

1. ಕರ್ನಾಟಕ ರಾಜ್ಯ ತೆಂಗಿನ ನಾರಿನ ಅಭಿವೃದ್ಧಿ ನಿಗಮ ನಿಯಮಿತದ 2005–06ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಮಂಡಿಸುತ್ತೇನೆ.

11) ಶ್ರೀ ಎಂ.ಪಿ.ಪ್ರಕಾಶ್ (ಕೃಷಿ ಸಚಿವರ ಪರವಾಗಿ) ಅವರು:

1963ರ ಕೃಷಿ ವಿಶ್ವವಿದ್ಯಾಲಯದ ಕಾಯ್ದೆ ಕಲಂ 38(3)ರ ಮೇರೆಗೆ :

1. ಕೃಷಿ ವಿಶ್ವಿದ್ಯಾಲಯ, ಧಾರವಾಡದ 2005–06ನೇ ಸಾಲಿನ ವಾರ್ಷಿಕ ವರದಿ.

1956ರ ಕಂಪನಿ ಅಧಿನಿಯಮ 619(ಎ) ಪ್ರಕರಣದ ಮೇರೆಗೆ:

1. ಕರ್ನಾಟಕ ರಾಜ್ಯ ಬೀಜ ನಿಗಮ ನಿಯಮಿತದ 33ನೇ 2005–06ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿ.

2. ಕರ್ನಾಟಕ ತೊಗರಿ ಅಭಿವೃದ್ಧಿ ಮಂಡಳಿ ನಿಯಮಿತದ 2005–06ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿ.

3. ಕರ್ನಾಟಕ ರಾಜ್ಯ ಆಗ್ರೋ ಕಾರ್ನ್ ಪ್ರಾಡೆಕ್ಟ್ ನಿಯಮಿತದ 33ನೇ 2005–06ನೇ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನ ವರದಿ.

4. ಕರ್ನಾಟಕ ಆಗ್ರೋ ಇಂಡಸ್ಟ್ರೀಸ್ ಕಾರ್ಪೋರೇಷನ್ ನಿಯಮಿತದ 38ನೇ 2004–05ನೇ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿ.

5. ಕರ್ನಾಟಕ ರಾಜ್ಯ ಕಂಪೋಸ್ಟ್ ಡೆವೆಲಪ್‌ಮೆಂಟ್ ಕಾರ್ಪೋರೇಷನ್ ನಿಯಮಿತದ 30ನೇ 2005–06ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಮಂಡಿಸುತ್ತೇನೆ.

12) ಶ್ರೀ ಎಂ.ಪಿ.ಪ್ರಕಾಶ್ (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರ ಪರವಾಗಿ) ಅವರು:

1995ರ ಕರ್ನಾಟಕ ರಾಜ್ಯ ಮಹಿಳಾ ಆಯೋಗದ 14ನೇ ಪ್ರಕರಣದ ಮೇರೆಗೆ :

1. ಕರ್ನಾಟಕ ರಾಜ್ಯ ಮಹಿಳಾ ಆಯೋಗ, ಬೆಂಗಳೂರಿನ 2005–06ನೇ ಸಾಲಿನ ವಾರ್ಷಿಕ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಮಂಡಿಸುತ್ತೇನೆ.

3. ಅಧ್ಯಕ್ಷರ ಅಪ್ಪಣೆ ಮೇರೆಗೆ ಪ್ರಸ್ತಾಪಿಸಲಾದ ವಿಷಯಗಳು.

1. ಬೆಂಗಳೂರಿನಲ್ಲಿ ಭಯೋತ್ಪಾದಕ ಚಟುವಟಿಕೆ ಬಗ್ಗೆ.

ಶ್ರೀ ವಾಟಾಳ್ ನಾಗರಾಜ್ (ಚಾಮರಾಜ ನಗರ) : ಮಾನ್ಯ ಅಧ್ಯಕ್ಷರೆ, ಒಂದು ವಿಚಾರವನ್ನು ಪ್ರಸ್ತಾಪ ಮಾಡುವುದಕ್ಕೆ ತಮ್ಮಲ್ಲಿ ಅವಕಾಶವನ್ನು ಕೇಳಿದ್ದೆ. ತಾವು ನನಗೆ ಒಂದು ನಿಮಿಷ ಅವಕಾಶ ಕೊಡಿ. ಮಾನ್ಯ ಮುಖ್ಯಮಂತ್ರಿಗಳ ಗಮನಕ್ಕೆ ಈ ವಿಷಯವನ್ನು ತರುವುದಕ್ಕೆ ಬಯಸುತ್ತೇನೆ. ಇತ್ತೀಚಿನ ದಿನಗಳಲ್ಲಿ ಬೆಂಗಳೂರು ನಗರದಲ್ಲಿ ಭಯೋತ್ಪಾದಕರು ಜಾಸ್ತಿಯಾಗಿರತಕ್ಕಂಥದವರ ಬಗ್ಗೆ ದೇಶ ವಿದೇಶಗಳಲ್ಲಿ ಬೆಂಗಳೂಈರಿನ ಕಡೆ ಗಮನ ಹರಿಸತಕ್ಕಂಥಾದ್ದರಿಂದ